# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 915 |
| ಸದಸ್ಯರು ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 17.12.2024 |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಬಾಗಲಕೋಟೆ ನಗರದಲ್ಲಿರುವ ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ಪ್ರಸಕ್ತ ಸಾಲಿನಲ್ಲಿ ಮೀಸಲಿಟ್ಟ ಅನುದಾನ ಎಷ್ಟು; | ಬಾಗಲಕೋಟೆ ನಗರದಲ್ಲಿರುವ ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ಪ್ರಸಕ್ತ ಸಾಲಿನಲ್ಲಿ ರೂ.11320.94 ಲಕ್ಷಗಳ ಅನುದಾನ ಮೀಸಲಿಟ್ಟಿರುತ್ತದೆ. |
| ಆ) | ಬೆಂಗಳೂರಿನಲ್ಲಿರುವ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿರುವ ಎಲ್ಲಾ ಸೌಲಭ್ಯಗಳು ಬಾಗಲಕೋಟೆ ವಿಶ್ವವಿದ್ಯಾಲಯಕ್ಕೆ ಒದಗಿಸಲಾಗಿದೆಯೇ: ಒದಗಿಸಿದ್ದಲ್ಲಿ, ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ: ಹಾಗೂ ಇನ್ನು ಒದಗಿಸಬೇಕಾದ ಸೌಲಭ್ಯಗಳು ಯಾವವು: ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು: (ವಿವಿರ ನೀಡುವುದು) | ಒದಗಿಸಲಾಗಿದೆ.<br><br>**ಸೌಲಭ್ಯಗಳು ಕೆಳಗಿನಂತಿವೆ:-**<br>ಮಹಾವಿದ್ಯಾಲಯದ ಕಟ್ಟಡ, ವಿದ್ಯಾರ್ಥಿನಿಯರ ವಸತಿ ನಿಲಯಗಳ ಕಟ್ಟಡ , ಪ್ರಾದೇಶಿಕ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ಕಟ್ಟಡ, Tissue Culture Laboratory ಯನ್ನು ಮತ್ತು ಆಟದ ಮೈದಾನ ಇತ್ಯಾದಿಗಳನ್ನು ಒದಗಿಸಲಾಗಿದೆ.<br><br>**ಒದಗಿಸಬೇಕಾದ ಸೌಲಭ್ಯಗಳು ಕೆಳಗಿನಂತಿವೆ:-**<br>ಪ್ರೇಕ್ಷಾಗೃಹ ಕಟ್ಟಡ, ಗ್ರಂಥಾಲಯ ಕಟ್ಟಡ, ವಸತಿ ಗೃಹಗಳು, ನೀರಿನ ವ್ಯವಸ್ಥೆ, ಉಪಹಾರ ಮಂದಿರ ಮತ್ತು ಹೊರಾಂಗಣ ಕ್ರೀಡಾಂಗಣ ಸೌಲಭ್ಯವನ್ನು ಒದಗಿಸಬೇಕಾಗಿದ್ದು, ಅನುದಾನದ ಲಭ್ಯತೆಗೆ ಅನುಗುಣವಾಗಿ ಸೌಲಭ್ಯವನ್ನು ಒದಗಿಸಲಾಗುವುದು.<br><br>ಕಾಲಮಿತಿ ಇರುವುದಿಲ್ಲ. |
| ಇ) | ಬೆಂಗಳೂರಿನ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿರುವ ಸಫಲ ಎಂಬ ಮಾರುಕಟ್ಟೆಯನ್ನು ಬಾಗಲಕೋಟೆ ತೋಟಗಾರಿಕೆ | ಬೆಂಗಳೂರಿನ ತೋಟಗಾರಿಕೆ ವಿಶ್ವ ವಿದ್ಯಾಲಯದಲ್ಲಿ 'ಸಫಲ' ಎಂಬ ಮಾರುಕಟ್ಟೆ ಇರುವುದಿಲ್ಲ. ಬಾಗಲಕೋಟೆ ತೋಟಗಾರಿಕೆ ವಿಶ್ವ ವಿದ್ಯಾಲಯದಲ್ಲಿ |

| | | |
|---|---|---|
| | ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಲು ಇರುವ ಅಡಚಣೆಗಳೇನು; (ಸಂಪೂರ್ಣ ಮಾಹಿತಿಯೊಂದಿಗೆ ವಿವರಿಸುವುದು) | ಮಾರುಕಟ್ಟೆಯನ್ನು ಸ್ಥಾಪಿಸುವ ಪ್ರಸ್ತಾವನೆಯು ತೋಟಗಾರಿಕೆ ಇಲಾಖೆಯಲ್ಲಿ ಇರುವುದಿಲ್ಲ. |
| ಈ) | ಸದರಿ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ: ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಸ್ಥಾಪಿಸಲಾಗುವುದು? (ಮಾಹಿತಿ ನೀಡುವುದು) | ಇರುವುದಿಲ್ಲ. |

No: HORTI 545 HGM 2024(E)

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು